ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸೈ.ಕ.

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ

ದಿನಾಂಕ : DATE : 7.12.19.

### ಧ್ವಜ ದಿನಾಚರಣೆಯಲ್ಲಿ ಸಿಎಂ ಘೋಷಣೆ | ಭವನ ನಿರ್ಮಾಣಕ್ಕೆ 5 ಕೋಟಿ ರೂ. ನೆರವು

# ಸೈನಿಕರ ಕಲ್ಯಾಣ ಇಲಾಖೆಗೆ ಒಂದು ಎಕರೆ

ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಸೈನಿಕರ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಗೆ 1 ಎಕರೆ ಭೂಮಿ ಮಂಜೂರು ಮಾಡಿ, ಅಲ್ಲಿ ಭವನ ನಿರ್ಮಾಣ ಮಾಡಲು 5 ಕೋಟಿ ರೂ. ಆರ್ಥಿಕ ನೆರವು ನೀಡಲಾಗುವುದು ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹೇಳಿದ್ದಾರೆ.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಸಶಸ್ತ್ರ ಪಡೆಗಳ ಧ್ವಜ ದಿನಾಚರಣೆ ಅಂಗವಾಗಿ ಏರ್ಪಡಿಸಲಾಗಿದ್ದ ಕಾರ್ಯಕ್ರಮದಲ್ಲಿ ಮಿಲಿಟರಿ ಸಮವಸ್ತ್ರದ ಬಗ್ಗೆ ಎಂ. ಪ್ರಭಾಕರನ್ ವಿರಚಿತ ಪುಸ್ತಕ ಹಾಗೂ ಧ್ವಜ ಬಿಡುಗಡೆ, ಧ್ವಜನಿಧಿ ಪಾರಿತೋಷಕಗಳ ವಿತರಣೆ ಮಾಡಿ ಮಾತನಾಡಿದರು. ಸೈನಿಕರ ಸೇವೆ ಬಗ್ಗೆ ಸಮಾಜದಲ್ಲಿ ಅಪಾರವಾದ ಪ್ರೀತಿ, ಗೌರವವಿದೆ. ಸೇವಾ ಭಾವನೆಯಿಂದ ಸೇನೆ ಸೇರುವ ಮೂಲಕ ದೇಶಕ್ಕಾಗಿ ತಮ್ಮ ಪ್ರಾಣ ಮುಡಿಪಿಟ್ಟು ಕೆಲಸ ಮಾಡುವವರ ಹಿತ ಕಾಯಲು ಸರ್ಕಾರ ಬದ್ಧವಾಗಿದೆ. ಮುಂದಿನ ಬಾರಿ ರಾಜ್ಯೋತ್ಸವ ಪ್ರಶಸ್ತಿ ನೀಡುವ ಸಂದರ್ಭದಲ್ಲಿ ಮಾಜಿ ಸೈನಿಕರನ್ನು ಪರಿಗಣಿಸಲು ನಿರ್ಧರಿಸಿದ್ದೇನೆ. ಇದು ನನ್ನ ಕರ್ತವ್ಯವೂ ಹೌದು ಎಂದರು.

ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ನಿರ್ದೇಶಕ ಬ್ರಿಗೇಡಿಯರ್ ರವಿ ಮುನಿಸ್ವಾಮಿ ಮಾತನಾಡಿ, ಸರ್ಕಾರದಲ್ಲಿ ಬಾಕಿ ಇರುವ ಬೇಡಿಕೆಗಳ ಬಗ್ಗೆ ಗಮನ ಸೆಳೆದರು. ಗೃಹ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್, ಲೆಫ್ಟಿನೆಂಟ್ ಜನರಲ್ ಎಂ.ಕೆ.ಎಸ್. ಯಾದವ್ ಉಪಸ್ಥಿತರಿದ್ದರು.

ವಿಜಯವಾಣಿ ಚಿತ್ರ



ಕೆಎಸ್ಆರ್‌ಟಿಸಿ ಎಂಡಿ ಶಿವಯೋಗಿ ಕಳಸದ ಸಿಎಂ ಯಡಿಯೂರಪ್ಪ ಅವರಿಂದ ಧ್ವಜನಿಧಿ ಪಾರಿತೋಷಕ ಸ್ವೀಕರಿಸಿದರು.

> ಮಾಜಿ ಸೈನಿಕರು, ಯುದ್ಧ ಸಂತ್ರಸ್ತರು, ಸೇವಾನಿರತರ ಕಲ್ಯಾಣಕ್ಕೆ ಹಮ್ಮಿಕೊಂಡಿರುವ ವಿವಿಧ ಚಟುವಟಿಕೆಗಳಿಗೆ ಎಲ್ಲ ರೀತಿಯ ನೆರವು, ಪ್ರೋತ್ಸಾಹ ನೀಡಲಾಗುವುದು. ಸೈನ್ಯಕ್ಕೆ ಸೇರಲು ಗ್ರಾಮೀಣ ಜನರಿಗೆ ಪ್ರೇರೇಪಿಸಲಾಗುವುದು.
>
> | ಬಿ.ಎಸ್. ಯಡಿಯೂರಪ್ಪ ಮುಖ್ಯಮಂತ್ರಿ